ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಃ ನ್ಯಾಯಾಲಯ, ಮದ್ದೂರು

ಸಿಸಿ 1349/2023

| | | |
|---|---|---|
| ಸಾಕ್ಷಿದಾರರ ಹೆಸರು | - ತರುಣ್ ಕುಮಾರ್ | ಚಾಸಾ-1 |
| ತಂದೆಯ ಹೆಸರು | - ಪುಟ್ಟಸ್ವಾಮಿ | ಫ್ರಾಸಾ-1 |
| ವಯಸ್ಸು | - 23 ವರ್ಷ | |
| ಉದ್ಯೋಗ | - ಚಾಲಕ | |
| ವಾಸಸ್ಥಳ | - ಕೆ.ಬೆಳ್ಳೂರು | |

ದಿನಾಂಕಃ- 08-07-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎಪಿಪಿ ರವರಿಂದಃ-**

ಚಾಸಾ-2, 3 ರವರ ಪರಿಚಯವಿರುತ್ತದೆ. ಮೃತ ಪುಟ್ಟಸ್ವಾಮಿ ರವರು ನನ್ನ ತಂದೆ, ಅವರು ಅಪಘಾತದಿಂದ ಮೃತಪಟ್ಟಿರುತ್ತಾರೆ. ಯಾರು ಯಾವ ವಾಹನದಿಂದ ಅಪಘಾತಪಡಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಅಪಘಾತವನ್ನು ನಾನು ಕಣ್ಣಾರೆ ನೋಡಿಲ್ಲ, ಯಾರ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ದೂರು ನೀಡಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆ ದೂರು ಆಗಿದ್ದು, ಅದನ್ನು ನಿಪಿ-1 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1 ಎ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-**

ದಿ 15-07-2023 ರಂದು ಬೆಳಗ್ಗೆ 9.00 ಗಂಟೆ ಸಮಯದಲ್ಲಿ ನಿಮ್ಮ ತಂದೆಯಾದ ಪುಟ್ಟಸ್ವಾಮಿ ಕೆಎ-11-ಇಕ್ಯೂ-5705 ರ ಬೈಕ್ ನಲ್ಲಿ ಚನ್ನಪಟ್ಟಣದ ಬನ್ನಿಕುಪ್ಪೆ ಗ್ರಾಮಕ್ಕೆ ಹೋಗಿ ವಾಪಸ್ಸು ಬರುತ್ತಿದ್ದರು ಎಂದರೆ ಸರಿಯಲ್ಲ. ಅದೇ ದಿನ ಸಂಜೆ 4.00 ಗಂಟೆಗೆ ಚಾಸಾ-2 ರವರು ನಿಮಗೆ ಕರೆ ಮಾಡಿ ನಿಮ್ಮ ತಂದೆಯವರು ರುದ್ರಾಕ್ಷಿಪುರ ಕಡೆಯಿಂದ ಕೆ ಬೆಳ್ಳೂರು ಗ್ರಾಮದ ಕಡೆ ಹೊನ್ನಲಗೆರೆ ಗ್ರಾಮದ ಪ್ರಕಾಶ್ ರವರ ಇಟ್ಟಿಗೆ ಗೂಡಿನ ಹತ್ತಿರ ಬರುತ್ತಿದ್ದಾಗ, ಅದೇ ಸಮಯಕ್ಕೆ ಎದುರುಗಡೆಯಿಂದ ಟಾಟಾ ಏಸ್ ವಾಹನದ ಚಾಲಕ ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಿಮ್ಮ ತಂದೆಯಾದ ಮೃತ ಪುಟ್ಟಸ್ವಾಮಿ ರವರಿಗೆ ಡಿಕ್ಕಿಪಡಿಸಿದ ಪರಿಣಾಮ ಅವರು ಕೆಳಗೆ ಬಿದ್ದು ಹೋಗಿದ್ದು, ತೀವ್ರ ಸ್ವರೂಪದಲ್ಲಿ ಪೆಟ್ಟಾಗಿರುತ್ತದೆ ಎಂದರೆ ಸರಿಯಲ್ಲ. ನಂತರ ನೀವು ಮತ್ತು ಚಾಸಾ-2 ರವರು ಸ್ಥಳಕ್ಕೆ ಬಂದು ನೋಡಿದಾಗ ನಿಮ್ಮ ತಂದೆಗೆ ತಲೆ ಮತ್ತು ಇತರ ಕಡೆ ರಕ್ತಗಾಯವಾಗಿತ್ತು ಎಂದರೆ ಸರಿಯಲ್ಲ. ಅಪಘಾತಪಡಿಸಿದ ವಾಹನವು ಅಲ್ಲಿಯೇ ಇದ್ದು ಆ ವಾಹನದ ನಂಬರ್ ಕೆಎ-11-ಸಿ-1824 ಆಗಿದ್ದು, ಸದರಿ ವಾಹನದ ಚಾಲಕ ಗಾಯಾಳುವನ್ನು ಉಪಚರಿಸದೇ

ಸ್ಥಳದಿಂದ ಹೋಗಿದ್ದರು ಎಂದರೆ ಸರಿಯಲ್ಲ. ನಂತರ ಯಾವುದೋ ವಾಹನದಲ್ಲಿ ನೀವು ಗಾಯಾಳುವಾದ ಪುಟ್ಟಸ್ವಾಮಿ ರವರನ್ನು ಪ್ರಥಮ ಚಿಕಿತ್ಸೆ ಕೊಡಿಸಿ, ವೈದ್ಯರ ಸಲಹೆಯ ಮೇರೆಗೆ ಹೆಚ್ಚಿನ ಚಿಕಿತ್ಸೆಗಾಗಿ ನೀವು ಮತ್ತು ಅಲ್ಲಿಯೇ ಇದ್ದ ನಿಮ್ಮ ದೊಡ್ಡಪ್ಪನಾದ ದೊಡ್ಡಯ್ಯ ರವರ ಜೊತೆ ಮಂಡ್ಯ ಜಿಲ್ಲಾ ಆಸ್ಪತ್ರೆಗೆ ಹೋಗಿ ಒಳರೋಗಿ ದಾಖಲಿಸಿರುತ್ತೀರಿ ಎಂದರೆ ಸರಿಯಲ್ಲ. ನಂತರ ಅವರು ಚಿಕಿತ್ಸೆ ಫಲಕಾರಿಯಾಗದೇ ನಿಮ್ಮ ತಂದೆಯಾದ ಪುಟ್ಟಸ್ವಾಮಿ ರವರು ಮೃತಪಟ್ಟಿರುತ್ತಾರೆಂದರೆ ಸರಿಯಲ್ಲ.

ಸದರಿ ಗಲಾಟೆಯ ಹಿನ್ನಲೆಯಲ್ಲಿ ಅದೇದಿನ ರಾತ್ರಿ 8.00 ಗಂಟೆಗೆ ಮದ್ದೂರು ಪೋಲೀಸ್ ಠಾಣೆಗೆ ಹೋಗಿ ದೂರು ನೀಡಿರುತ್ತೀರಿ ಎಂದರೆ ಸರಿಯಲ್ಲ. ನಿಮಗೆ ನಿಪಿ-1 ರಲ್ಲಿರುವ ವಿಚಾರಗಳು ಎಲ್ಲಾ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಮಾನ್ಯ ಶ್ರೀ.ಜಿಎನ್ ಎಸ್ ವಕೀಲರಿಂದಃ-**

ಏನು ಇಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)
ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ.

ಎರಡನೇ ಅಪರ ಸಿವಿಲ್ ಮತ್ತು ಜೆಎಂಎಫ್,ಸಿ,
ನ್ಯಾಯಾಧೀಶರು, ಮದ್ದೂರು.

ಸಾಕ್ಷಿಯ ಸಹಿಃ